# ಮೈಸೂರು ವಿಶ್ವವಿದ್ಯಾನಿಲಯ

ಸ್ಥಾಪನೆ 1916

(ನ್ಯಾಕ್ ಸಂಸ್ಥೆಯ ಮರು ಮಾನ್ಯತೆಯಲ್ಲಿ 'ಎ' ಗ್ರೇಡ್ ಪಡೆದಿದೆ)

(ಎನ್‌ಐಆರ್‌ಎಫ್-2022: ವಿಶ್ವವಿದ್ಯಾನಿಲಯ ವರ್ಗದಲ್ಲಿ 33ನೇ ಸ್ಥಾನ ಮತ್ತು ಒಟ್ಟಾರೆ ವರ್ಗದಲ್ಲಿ 54ನೇ ಸ್ಥಾನವನ್ನು ಹೊಂದಿದೆ)


ಸಂಖ್ಯೆ:ಪ.ವಿ.8.4/ಇತರೆ-2/2018-19


ಕುಲಸಚಿವ (ಪರೀಕ್ಷಾಂಗ)ರವರ ಕಛೇರಿ<br>
ವಿಶ್ವವಿದ್ಯಾನಿಲಯ ಕಾರ್ಯಸೌಧ<br>
ಕ್ರಾಫರ್ಡ್ ಭವನ, ಮೈಸೂರು-570 005


ದಿನಾಂಕ: 18-01-2023

## ಸುತ್ತೋಲೆ

ವಿಷಯ: ಸ್ವಾಯತ್ತ ಕಾಲೇಜುಗಳ ಅಧ್ಯಾಪಕರುಗಳು ವಿಶ್ವವಿದ್ಯಾನಿಲಯ ಪರೀಕ್ಷಾ ಕಾರ್ಯಗಳಲ್ಲಿ ಪಾಲ್ಗೊಳ್ಳುವ ಬಗೆಗೆ.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಈ ಮೂಲಕ ತಿಳಿಯಪಡಿಸುವುದೇನೆಂದರೆ, ಸ್ವಾಯತ್ತತೆ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಕೆಲವು UGC ವೇತನ ಪಡೆಯುತ್ತಿರುವ ಹಾಗೂ Non-UGC ಅಧ್ಯಾಪಕರುಗಳು ವಿಶ್ವವಿದ್ಯಾನಿಲಯದ ಪರೀಕ್ಷಾ ಕಾರ್ಯಗಳಲ್ಲಿ ಪಾಲ್ಗೊಳ್ಳುತ್ತಿಲ್ಲವೆಂಬ ದೂರುಗಳು ಕೇಳಿಬರುತ್ತಿದೆ. ಇದರಿಂದಾಗಿ, ಸದರಿ ಕೆಲಸ-ಕಾರ್ಯಗಳನ್ನು ಸಕಾಲಕ್ಕೆ ಪೂರ್ಣಗೊಳಿಸಲು ಸಾಧ್ಯವಾಗುತ್ತಿಲ್ಲ.

ಆದುದರಿಂದ, ಇಂದಿನಿಂದಲೇ ಜಾರಿಗೆ ಬಂದಂತೆ, ವಿಶ್ವವಿದ್ಯಾನಿಲಯ ವಹಿಸುವ ಎಲ್ಲಾ ರೀತಿಯ ಕೆಲಸ-ಕಾರ್ಯಗಳಲ್ಲಿ ಪಾಲ್ಗೊಂಡು (ಉದಾ: ಪ್ರಶ್ನೆಪತ್ರಿಕೆ ಸಿದ್ಧತೆ: ಪ್ರಾಯೋಗಿಕ ಪರೀಕ್ಷೆ, ಮೌಲ್ಯಮಾಪನ ಕಾರ್ಯ ಇತ್ಯಾದಿ) ಪರೀಕ್ಷಾ ಕಾರ್ಯಗಳನ್ನು ಸುಸೂತ್ರವಾಗಿ ನಡೆಸಲು ಸಹಕರಿಸಬೇಕಾಗಿ ತಿಳಿಸಿದೆ.

ಈ ಎಲ್ಲಾ ಅಂಶಗಳನ್ನು ಪ್ರತಿ ಅಧ್ಯಾಪಕರುಗಳ ಗಮನಕ್ಕೆ ತಂದು ಯಾವುದೇ ರೀತಿಯ ತೊಂದರೆ ಕೊಡದೇ ಪರೀಕ್ಷಾ ಕಾರ್ಯಗಳಿಗೆ ಕಳುಹಿಸಿಕೊಡಬೇಕಾಗಿ ಕೋರಲಾಗಿದೆ.

Anand 19/1/23

ಕುಲಸಚಿವ (ಪರೀಕ್ಷಾಂಗ)

ಗೆ:

1. ಮೈಸೂರು ವಿಶ್ವವಿದ್ಯಾನಿಲಯದ ವ್ಯಾಪ್ತಿಗೆ ಬರುವ ಮೈಸೂರು, ಮಂಡ್ಯ ಹಾಸನ ಮತ್ತು ಚಾಮರಾಜನಗರ ಜಿಲ್ಲೆಗಳ ಎಲ್ಲಾ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳು/ನಿರ್ದೇಶಕರು/ಡೀನರು, ವಾಕ್ ಮತ್ತು ಶ್ರವಣ ಸಂಸ್ಥೆ, ಮಾನಸಗಂಗೋತ್ರಿ, ಮೈಸೂರು/ಜೆ.ಎಸ್.ಎಸ್. ಕಾಲೇಜು ವಾಕ್ ಮತ್ತು ಶ್ರವಣ ಸಂಸ್ಥೆ, ಎಂ.ಜಿ.ರಸ್ತೆ, ಚಾಮರಾಜೇಂದ್ರ ದೃಶ್ಯ ಕಲಾ ಅಕಾಡೆಮಿ (ಕಾವ) ಸಿದ್ಧಾರ್ಥನಗರ, ಮೈಸೂರು.
2. ಸಂಯೋಜನಾಧಿಕಾರಿಗಳು, ಪರೀಕ್ಷಾ ಸುಧಾರಣಾ ಘಟಕ, ಪರೀಕ್ಷಾ ಭವನ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
3. ಮಾನ್ಯ ಕುಲಪತಿಗಳ/ಕುಲಸಚಿವರ/ಕುಲಸಚಿವ(ಪರೀಕ್ಷಾಂಗ)/ಹಣಕಾಸು ಅಧಿಕಾರಿ ಅವರುಗಳ ಆಪ್ತ ಸಹಾಯಕರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
4. ಕಛೇರಿ ಪ್ರತಿ.

E:S/8.6\Kannda Letters-Ja